ಆ) ಬಂದಿದ್ದಲ್ಲಿ ಈ ನಗರಕ್ಕೆ ಒಳಚರಂಡಿ ಯೋಜನೆ ಜಾರಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಲಕ್ಷ್ಮೇಶ್ವರ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಜಿ.ಐ.ಎಸ್. ಸರ್ವೇಕ್ಷಣ ಕಾಮಗಾರಿ, ವಿನ್ಯಾಸ ಮತ್ತು ಅಂದಾಜು ಪಟ್ಟಿ ತಯಾರಿಸಲು ಅವಶ್ಯವಿರುವ ಮೊತ್ತ ರೂ.6.50 ಲಕ್ಷಗಳನ್ನು ಜಲ ಮಂಡಳಿಗೆ ಭರಣಾ ಮಾಡಲು ಈಗಾಗಲೇ ಲಕ್ಷ್ಮೇಶ್ವರ ಪುರಸಭೆಯವರಿಗೆ ಕೋರಲಾಗಿದೆ. ಪುರಸಭೆಯಿಂದ ಹಣ ಭರಣ ಮಾಡಿದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಇ) ಈ ಬಗ್ಗೆ ಸರ್ಕಾರದ ಮಾರ್ಗಸೂಚಿ ಏನಾದರೂ ಇವೆಯೇ;

ರಾಜ್ಯ ಸರ್ಕಾರದ ಮಾರ್ಗಸೂಚಿಯ ಪ್ರಕಾರ 50 ಸಾವಿರ ಜನಸಂಖ್ಯೆಯನ್ನು ಹೊಂದಿರುವ ಪಟ್ಟಣಗಳಿಗೆ ದಿನಂಪ್ರತಿ ತಲಾ 100 ಎಲ್‌ಪಿಸಿಡಿ ನೀರನ್ನು ಸರಬರಾಜು ಮಾಡಬೇಕಾಗಿದೆ.

ಕೇಂದ್ರ ಸರ್ಕಾರದ ಮಾರ್ಗಸೂಚಿಯ ಪ್ರಕಾರ 50ಸಾವಿರಕ್ಕೂ ಹೆಚ್ಚಿನ ಜನಸಂಖ್ಯೆಯುಳ್ಳ ಪಟ್ಟಣಗಳಿಗೆ ದಿನಂಪ್ರತಿ ತಲಾ 135 ಎಲ್‌ಪಿಸಿಡಿ ನೀರನ್ನು ಸರಬರಾಜು ಮಾಡಬೇಕಾಗಿದೆ.

ಹಣಕಾಸಿನ ಲಭ್ಯತೆಯ ಮೇಲೆ ವಾರ್ಷಿಕ ಕ್ರಿಯಾ ಯೋಜನೆಯನ್ನು ತಯಾರಿಸಲಾಗುತ್ತಿದ್ದು, ಕ್ರಿಯಾ ಯೋಜನೆಯಲ್ಲಿ ಅಳವಡಿಸಲಾದ ನಗರ ನೀರು ಸರಬರಾಜು ಕಾಮಗಾರಿಯನ್ನು ತೆಗೆದುಕೊಳ್ಳಲಾಗುತ್ತಿದೆ.

ಈ) ಇದ್ದಲ್ಲಿ, ಯಾವ ಮಾರ್ಗಸೂಚಿ ಪ್ರಕಾರ ಈ ಯೋಜನೆಯನ್ನು ಜಾರಿಗೊಳಿಸಲಾಗುವುದು?

ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1109(1549)

ಮಾನ್ಯ ಸದಸ್ಯರ ಹೆಸರು : ಶ್ರೀ.ಗಡ್ಡದೇವರಮಠ್ ಗಡ್ಡಯ್ಯ ಶಿವಮೂರ್ತಯ್ಯ (ಶಿರಹಟ್ಟಿ)

ಉತ್ತರಿಸುವ ಸಚಿವರು : ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ವಿದ್ಯುತ್ ಬಾಕಿ ಉಳಿಸಿಕೊಂಡಿರುವ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುತ್ತಿಲ್ಲ.

ಆ) ಬಂದಿದ್ದಲ್ಲಿ, ಬರಗಾಲದ ಅಂತಹ ಕ್ಲಿಷ್ಟಕರ ಸಂದರ್ಭದಲ್ಲಿ ರೈತರ ವಿದ್ಯುತ್ ಸಂಪರ್ಕ ಕಡಿತಗೊಳಿಸದಿರಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಈ ಸಂಪರ್ಕವನ್ನು ಕಡಿತ ಗೊಳಿಸದಂತೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ;

ಇದು ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1110(1542)**

ಮಾನ್ಯ ಸದಸ್ಯರ ಹೆಸರು : **ಶ್ರೀ.ಗೋಪಾಲಕೃಷ್ಣ ಬೇಳೂರು ಬಿ.ಕೆ. (ಸಾಗರ)**

ಉತ್ತರಿಸುವ ಸಚಿವರು : **ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)**

ಅ) ಶರಾವತಿ ಹಿನ್ನೀರಿನ ಪ್ರದೇಶವಾದ ಹಸಿರು ಗ್ರಾಮಕ್ಕೆ ಕೇ.ಬಿ.ಸರ್ಕಲ್ ಮಧ್ಯೆ ಸೇತುವೆ ಇಲ್ಲದೆ ಸಾರ್ವಜನಿಕರು ಪ್ರಯಾಣಿಸಲು ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಬಂದಿದೆ.

ಆ) ಸೇತುವೆಯನ್ನು ಸರ್ಕಾರ ಇದುವರೆವಿಗೂ ನಿರ್ಮಿಸದಿರಲು ಕಾರಣವೇನು; ಇದಕ್ಕೆ ತಗಲುವ ವೆಚ್ಚವೆಷ್ಟು;

ಈ ಸೇತುವೆ ನಿರ್ಮಾಣವನ್ನು ತೆಗೆದುಕೊಳ್ಳಲು ರೂ.30.00 ಕೋಟಿಗಳಾಗುವುದೆಂದು ಅಂದಾಜಿಸಲಾಗಿದ್ದು, ಅನುದಾನದ ಲಭ್ಯತೆಗನುಸಾರವಾಗಿ ತೆಗೆದುಕೊಳ್ಳಲಾಗುವುದು.

ಇ) ಸೇತುವೆ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಸದರಿ ಸೇತುವೆಯನ್ನು ಅನುದಾನದ ಲಭ್ಯತೆಗನುಸಾರವಾಗಿ ತೆಗೆದುಕೊಳ್ಳಲಾಗುವುದು.

ಈ) ಯಾವಾಗ ನಿರ್ಮಿಸಲಾಗುವುದು (ವಿವರ ನೀಡುವುದು)?

ಮೇಲಿನಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು.